# ಕರ್ನಾಟಕ ವಿಧಾನ ಪರಿಷತ್ತು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ, ಇವರು ಬ್ರಹ್ಮಾವರದಲ್ಲಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯವನ್ನು ಸ್ಥಾಪಿಸುವ ಕುರಿತು ನಿಯಮ 72 ರ ಮೇರೆಗೆ ಸರ್ಕಾರದ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.

ಗಮನ ಸೆಳೆಯುವ ಸೂಚನೆ:

ಬ್ರಹ್ಮಾವರದಲ್ಲಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯವನ್ನು ಸ್ಥಾಪಿಸುವ ಕುರಿತು.

ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯವನ್ನು ಬ್ರಹ್ಮಾವರದಲ್ಲಿ ಪ್ರಕರಣಗಳು ಹೆಚ್ಚಾಗಿರುವುದರಿಂದ ಇಲ್ಲಿಗೆ ಸ್ಥಳಾಂತರಿಸಲು ಉಚ್ಚ ನ್ಯಾಯಾಲಯ ಹಾಗೂ ಸರ್ಕಾರ ನಿರ್ಧರಿಸಿದ್ದು, ಇದರ ವಿರುದ್ಧ ಉಡುಪಿ ಜಿಲ್ಲಾ ವಕೀಲರ ಸಂಘ ವರ್ಗಾಯಿಸದಿರಲು ಮನವಿ ಸಲ್ಲಿಸಿರುತ್ತಾರೆ. ಇವರ ಮನವಿ ಮೇರೆಗೆ ಸರ್ಕಾರದ ವತಿಯಿಂದ ಈ ಪ್ರಸ್ತಾವನೆಯನ್ನು ಕೈ ಬಿಡಲಾಗಿರುತ್ತದೆ. ಹಾಗೂ ಹೊಸದಾಗಿ ಬ್ರಹ್ಮಾವರದಲ್ಲಿ ಸಿವಿಲ್ ಜಡ್ಜ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯವನ್ನು ಸ್ಥಾಪಿಸಬೇಕೆಂಬ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿದ್ದು, ಇದನ್ನು ಅನುಷ್ಠಾನಗೊಳಿಸಲು ಮಾನ್ಯ ಕಾನೂನು, ನ್ಯಾಯ ಹಾಗೂ ಸಂಸದೀಯ ವ್ಯವಹಾರಗಳ ಸಚಿವರ ಗಮನ ಸೆಳೆಯ ಬಯಸುತ್ತೇನೆ.

ಉತ್ತರ:

ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ಇವರು ದಿನಾಂಕ:13.11.2025 ರ ಪತ್ರದಲ್ಲಿ, ರಾಜ್ಯದಲ್ಲಿ ವಿವಿಧ ಸ್ತರದ ನ್ಯಾಯಾಲಯಗಳ ಸ್ಥಾಪನೆಗೆ ಸಂಬಂಧಿಸಿದಂತೆ, 19 ನ್ಯಾಯಾಲಯಗಳ ಆದ್ಯತಾ ಪಟ್ಟಿಯನ್ನು ಒದಗಿಸಿದ್ದು, ಸದರಿ ಆದ್ಯತಾ ಪಟ್ಟಿಯಲ್ಲಿ, ಹೊಸದಾಗಿ ಸ್ಥಾಪಿಸಲಾದ 38 ತಾಲ್ಲೂಕುಗಳಲ್ಲಿ ಒಂದಾದ, ಬ್ರಹ್ಮಾವರ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಸ್ಥಾಪಿಸುವ ಪ್ರಸ್ತಾವನೆಯು ಒಳಗೊಂಡಿರುತ್ತದೆ. ಈ ಪ್ರಸ್ತಾವನೆಯ ಕುರಿತು ವರದಿ/ಅಭಿಪ್ರಾಯ/ಸಹಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದ್ದು, 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯವನ್ನು ಬ್ರಹ್ಮಾವರಕ್ಕೆ ಸ್ಥಳಾಂತರಿಸುವ ಕ್ರಮದ ವಿರುದ್ಧವಾಗಿ ಉಡುಪಿಯ ಬಾರ್ ಅಸೋಷಿಯೇಷನ್ ರವರು ಉಚ್ಚ ನ್ಯಾಯಾಲಯದಲ್ಲಿ W.P. No.29401/2025 (PIL) ಪ್ರಕರಣವನ್ನು ದಾಖಲಿಸಿರುವುದರಿಂದ ಸ್ಥಳಾಂತರ ಮಾಡುವ /ಕೈಬಿಡುವ ಬಗ್ಗೆ ಆಡಳಿತ ಇಲಾಖೆಯೇ ಸ್ಪಷ್ಟ ನಿಲುವನ್ನು ತಳೆದು ಈ ನ್ಯಾಯಾಲಯ ಪ್ರಕರಣವನ್ನು ಹಿಂಬಾಲಿಸುವಂತೆ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ಆ ಮೇರೆಗೆ, ಉಡುಪಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯವನ್ನು ಬ್ರಹ್ಮಾವರಕ್ಕೆ ಸ್ಥಳಾಂತರಿಸುವ ಪ್ರಸ್ತಾವನೆಯನ್ನು ಕೈಬಿಡಬಹುದಾಗಿದ್ದು, ಈ ಬಗ್ಗೆ ಅಗತ್ಯ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಮಾಹಿತಿ ಒದಗಿಸುವಂತೆ

ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ ರವರಿಗೆ ದಿನಾಂಕ:29.01.2026 ರಂದು ಪತ್ರ ಬರೆಯಲಾಗಿದೆ.

ಮುಂದುವರಿದು, ಬ್ರಹ್ಮಾವರದಲ್ಲಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯವನ್ನು ಸ್ಥಾಪಿಸುವ ಕುರಿತಾದ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

(ಹೆಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು

**ಸಂಖ್ಯೆ: ಲಾ-ಎಲ್‌ಸಿಇ/29/2026**



File No. LAW-LCE/29/2026-ADMN1-LAW SEC (Computer No. 2054832)